# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 171 | Pages. 2 | Date: 14-06-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 171 - ಪುಟಗಳು : 2 | 14-06-2026 | ಭಾನುವಾರ | Ph: 8762954248 | ದರ : ₹1


# ಆಸ್ಪತ್ರೆ ಸ್ಥಿತಿಗತಿ ಅರಿಯಲು ಉಚಿತ ಸಹಾಯವಾಣಿ

## ಆರೋಗ್ಯ ಸಚಿವ ಯು.ಟಿ.ಖಾದರ್ ಘೋಷಣೆ | ಸಕಲೇಶಪುರದಲ್ಲಿ ಪ್ರಗತಿ ಪರಿಶೀಲನೆ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ರಾಜ್ಯಾದ್ಯಂತ ಆರೋಗ್ಯ ಕೇಂದ್ರಗಳ ಸ್ಥಿತಿಗತಿ, ರೋಗಿಗಳ ಅಹವಾಲು ಆಲಿಸಲು ಉಚಿತ ಸಹಾಯವಾಣಿ ಆರಂಭಿಸುವ ಕುರಿತು ಚಿಂತನೆ ನಡೆದಿದೆ ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಹೇಳಿದರು.

ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಯಲ್ಲಿ ಶುಕ್ರವಾರ ರಾತ್ರಿ 11 ರಿಂದ 2 ಗಂಟೆ ವರೆಗೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ಐದು ವರ್ಷ ಸೇವೆ ಪೂರ್ಣಗೊಳಿಸಿದ ಹೊರ ಹೊತ್ತಿಗೆ ವೈದ್ಯರನ್ನು ಶೀಘ್ರ ಖಾಯಂ ಮಾಡಿಕೊಳ್ಳಲಾಗುವುದು. ಸಕಲೇಶಪುರದ ಕ್ರಾಫರ್ಡ್ ಆಸ್ಪತ್ರೆ ಆರಂಭವಾಗಿ ನೂರು ವರ್ಷ ಕಳೆದಿದೆ. ಕೆಲವು ಮೂಲ ಸೌಕರ್ಯಗಳ ಕೊರತೆ ಎದ್ದು






ಕಾಣುತ್ತಿದೆ. ಹಂತ ಹಂತವಾಗಿ ಸಮಸ್ಯೆ ಬಗೆಹರಿಸಲಾಗುವುದು.

ಪ್ರತಿ ತಿಂಗಳು ನೂರಕ್ಕೂ ಹೆಚ್ಚು ಹೆರಿಗೆಯಾಗುತ್ತಿದ್ದರೆ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಪ್ರತ್ಯೇಕ ಮಾಡುವ ಯೋಜನೆಯನ್ನು ರೂಪಿಸುವುದಾಗಿ ಭರವಸೆ ನೀಡಿದರು.

ಅಲ್ಲದೆ ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಯಂತ್ರವಿದ್ದು ಸಿಬ್ಬಂದಿ ಇಲ್ಲ. ಸ್ಕ್ಯಾನಿಂಗ್‌ಗೆ ರೋಗಿಗಳನ್ನ ಖಾಸಗಿ ಆಸ್ಪತ್ರೆಗೆ ಕಳಿಸುತ್ತಿರುವುದು ಕಂಡುಬಂದಿದ್ದು ಇನ್ನು ಮುಂದೆ ಇಂತಹ ಪ್ರಮಾದಗಳಿಗೆ ಆಸ್ಪದ ಮಾಡಿಕೊಡಬೇಡಿ ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

### ಔಷಧಿ ದಾಸ್ತಾನಿಗೆ ಸೂಚನೆ

ಮಲೆನಾಡು ಭಾಗದಲ್ಲಿ ಕಾಡು ಪ್ರಾಣಿಗಳು ಮತ್ತು ವಿಷ ಜಂತುಗಳ ಕಡಿತ ಹೆಚ್ಚಾಗಿ ಕಂಡುಬರುತ್ತದೆ. ಅದಕ್ಕೆ ಆಸ್ಪತ್ರೆಯಲ್ಲಿ ಹೆಚ್ಚು ವಿಷ ಜಂತುಗಳು ಕಡಿತದ ಔಷಧಿಗಳನ್ನ ಸಂಗ್ರಹ ಮಾಡಿ ಇಟ್ಟುಕೊಳ್ಳಬೇಕು. ಯಾವುದೇ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು. ರೇಬಿಸ್ ಕಡಿತ ಔಷಧಿಗೆ ಜನರು ಹೊರಗಿನಿಂದ 700 ರೂ. ಪಾವತಿಸಿ ಔಷಧಿಯನ್ನು ತರಿಸಿಕೊಳ್ಳುತ್ತಿದ್ದಾರೆಂದರೆ ಒಪ್ಪುವ ವಿಚಾರವಲ್ಲ. ಸರ್ಕಾರಿ ಆಸ್ಪತ್ರೆಯಲ್ಲಿ ಸಿಗುವ ಔಷಧಿಗಳನ್ನ ಹೊರಗಿನಿಂದ ತರಬೇಕೆಂದು ಚೀಟಿ ಬರೆದು ಕಳಿಸುತ್ತಿರುವುದು ನಮ್ಮ ಗಮನಕ್ಕೆ ಬಂದಿದ್ದು ಮುಂದೆ ಈ ರೀತಿ ಕಂಡು ಬಂದರೆ ಕಠಿಣ ಕ್ರಮ ಜರುಗಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಆಸ್ಪತ್ರೆ ಆಡಳಿತಾಧಿಕಾರಿ ಡಾ. ಅರುಣ್ ಕುಮಾರ್ ಮತ್ತು ತಾಲ್ಲೂಕು ವೈದ್ಯಾಧಿಕಾರಿ ಡಾ. ಮಹೇಶ್ ಅವರ ಪ್ರತಿಕ್ರಿಯೆಗೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಮುಂದಿನ ದಿನಗಳಲ್ಲಿ ಔಷಧಿ ಮತ್ತು ರೋಗಿಗಳ ಕಡೆಯಿಂದ ಯಾವುದೇ ಸಮಸ್ಯೆ ಇದೆ ಎಂಬುದು ನಮ್ಮ ಗಮನಕ್ಕೆ ಬಂದರೆ ಅದಕ್ಕೆ ನೀವೇ ಹೊಣೆಗಾರರಾಗುತ್ತೀರಿ ಎಂದು ಎಚ್ಚರಿಕೆ ನೀಡಿದರು.

ಆಸ್ಪತ್ರೆ ಎಂದರೆ ಭಯದ ವಾತಾವರಣ ಸೃಷ್ಟಿಯಾಗದೆ ಕುಟುಂಬ ಎಂಬ ಭಾವನೆ ಬರಬೇಕು. ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸುವುದು ವೈದ್ಯರು ಹಾಗು ಸಿಬ್ಬಂದಿ ಕರ್ತವ್ಯ. ರೋಗಿಗಳು ಬಂದ ವೇಳೆ ಅವರಿಗೆ ಮಾನವೀಯತೆಯಿಂದ ಚಿಕಿತ್ಸೆ ನೀಡಬೇಕು ಎಂದು ಹೇಳಿದರು.

### ಯು.ಟಿ.ಖಾದರ್ ಕಾರ್ಯವೈಖರಿಗೆ ಮೆಚ್ಚುಗೆ

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಕರ್ನಾಟಕದ ಇತಿಹಾಸದಲ್ಲೇ ಮಧ್ಯರಾತ್ರಿ ಪ್ರಗತಿ ಪರಿಶೀಲನೆ ಸಭೆ ನಡೆಸಿ ಆಡಳಿತ ಯಂತ್ರಕ್ಕೆ ಸಚಿವ ಯು.ಟಿ.ಖಾದರ್ ಚುರುಕು ಮುಟ್ಟಿಸಿದ್ದಾರೆ. ವಿಧಾನಸಭಾ ಅಧ್ಯಕ್ಷರಾಗಿದ್ದಾಗ ಅವರ ಕಾರ್ಯವೈಖರಿ ನೋಡಿದ್ದೇನೆ.

ಸದನದಲ್ಲಿ ಮಾತನಾಡಲು ಅವಕಾಶ ಸಿಗುವುದೆಂದರೆ ಕ್ಷೇತ್ರ ಅಭಿವೃದ್ಧಿಗೆ ಅನುದಾನ ಸಿಕ್ಕಷ್ಟೇ ಖುಷಿಯಾಗುತ್ತದೆ. ಅಂತದರಲ್ಲಿ ರಾಜ್ಯದ ಎಲ್ಲಾ ಶಾಸಕರಿಗೂ ಸಮಾನ ಅವಕಾಶ ಕಲ್ಪಿಸಿದ ಮೊದಲ ಸಭಾಧ್ಯಕ್ಷರಲ್ಲಿ ಇವರು ಎಂದರೆ ತಪ್ಪಾಗದು. ಆರೋಗ್ಯ ಇಲಾಖೆಯ ಕುರಿತು ಸಚಿವ ಯುಟಿ ಖಾದರ್ ಅವರಿಗೆ ಆಳವಾದ ಜ್ಞಾನವಿದೆ. ಈ ಹಿಂದೆ ಕೂಡ ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಅನುಭವ ಹೊಂದಿದ್ದಾರೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಸದ ಶ್ರೇಯಸ್ ಪಟೇಲ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್ ಮತ್ತಿತರರಿದ್ದರು.

## ಎನ್‌ಹೆಚ್‌ಎಂ ರದ್ದಾದರೆ ಕೆಲಸವೇ ಇಲ್ಲ

ರಾಷ್ಟ್ರೀಯ ಆರೋಗ್ಯ ಮಿಷನ್ (ಎನ್‌ಹೆಚ್‌ಎಂ) ಸಿಬ್ಬಂದಿಯನ್ನು ಖಾಯಂ ಮಾಡಿಕೊಳ್ಳುವುದು ಸಾಧ್ಯವಿಲ್ಲ. ಸಂಬಳ ಹೆಚ್ಚಳದ ಕುರಿತು ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಲಾಗುವುದು. ಎನ್‌ಹೆಚ್‌ಎಂ ಯೋಜನೆಯೇ ನಿಂತು ಹೋದರೆ ಉದ್ಯೋಗದ ಅವಕಾಶವೂ ಇರುವುದಿಲ್ಲ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಸಚಿವ ಯು.ಟಿ.ಖಾದರ್ ಹೇಳಿದರು.

ಎನ್‌ಹೆಚ್‌ಎಂ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಟಾಫ್ ನರ್ಸ್‌ಗಳು ವೇತನ ಹೆಚ್ಚಳ ಮತ್ತು ಉದ್ಯೋಗ ಭದ್ರತೆಗೆ ಆಗ್ರಹಿಸಿ ಕಣ್ಣೀರು ಸುರಿದು ಅಂಗಲಾಚಿದರು.

ಕಳೆದ 16 ವರ್ಷಗಳಿಂದ ಕೇವಲ 17 ಸಾವಿರ ರೂ. ಸಂಬಳಕ್ಕೆ ಕೆಲಸ ಮಾಡುತ್ತಿದ್ದೇವೆ. ವಯಸ್ಸಾಗುತ್ತಿದೆ,

ಮಕ್ಕಳು ದೊಡ್ಡವರಾಗುತ್ತಿದ್ದಾರೆ. ಅವರ ಶಿಕ್ಷಣ ಮತ್ತು ಕುಟುಂಬ ನಿರ್ವಹಣೆ ಕಷ್ಟವಾಗುತ್ತಿದೆ. ಎಲ್ಲಾ ರೀತಿಯ ಸೇವೆಗಳನ್ನು ನೀಡುತ್ತಿದ್ದರೂ ಜೀವನ ಸಾಗಿಸುವುದೇ ಕಷ್ಟವಾಗಿದೆ. ಈಗ ವಯಸ್ಸಾಗಿರುವುದರಿಂದ ಬೇರೆ ಉದ್ಯೋಗವೂ ಸಿಗುವುದಿಲ್ಲವೆಂದು ಅಳಲು ತೋಡಿಕೊಂಡರು.

ಈ ವೇಳೆ ನರ್ಸ್‌ಗಳು, ನಮ್ಮ ಸಹೋದ್ಯೋಗಿಗಳಲ್ಲಿ ಹಲವರು ವಿದೇಶಗಳಲ್ಲಿ ಉತ್ತಮ ಸಂಬಳ ಪಡೆಯುತ್ತಿದ್ದಾರೆ. ನಾವು ನಮ್ಮ ಊರಲ್ಲೇ ಸೇವೆ ಸಲ್ಲಿಸಿದರೆ ಒಂದಲ್ಲ ಒಂದು ದಿನ ಸರ್ಕಾರ ನಮ್ಮ ಪರಿಸ್ಥಿತಿಯನ್ನು ಪರಿಗಣಿಸಿ ವೇತನ ಹೆಚ್ಚಿಸಬಹುದೆಂಬ ನಿರೀಕ್ಷೆಯಲ್ಲಿ ಕೆಲಸ ಮಾಡುತ್ತಿದ್ದೇವೆ ಎಂದರು.

ಅದಕ್ಕೆ ಉತ್ತರಿಸಿದ ಸಚಿವರು, ನನಗೂ ಇಂತಹ ಅವಕಾಶಗಳು ಬಂದಿದ್ದವು. ನನ್ನ ಸ್ನೇಹಿತರು ಅಮೇರಿಕಾದಲ್ಲಿದ್ದಾರೆ. ನಾನು ಕೂಡ ಹೋಗಬಹುದಿತ್ತು. ಸಾರ್ವಜನಿಕ ಜೀವನವನ್ನು ಆಯ್ಕೆ ಮಾಡಿಕೊಂಡು ಜನಪ್ರತಿನಿಧಿಯಾಗಿದ್ದೇನೆ. ನಿಮ್ಮ ಸಮಸ್ಯೆ ಅರ್ಥ ಮಾಡಿಕೊಂಡಿದ್ದೇನೆಂದರು.

ಕೆಲವರು ಉದ್ಯೋಗವನ್ನು ಶಾಶ್ವತಗೊಳಿಸುವ ಭರವಸೆ ನೀಡಿ ಸಿಬ್ಬಂದಿಯನ್ನು ಬೆಂಗಳೂರಿಗೆ ಕರೆದುಕೊಂಡು ಹೋಗಿ ಪ್ರತಿಭಟನೆ ನಡೆಸಿ ಹಣ ವಸೂಲಿ ಮಾಡುವ ಸಾಧ್ಯತೆಗಳ ಬಗ್ಗೆ ಎಚ್ಚರಿಕೆ ನೀಡಿದ ಸಚಿವರು, ಯಾರಿಗೂ ನಯಾಪೈಸೆ ಕೊಡಬೇಡಿ. ಅಂತಹ ಭರವಸೆಗಳಿಗೆ ಮರುಳಾಗಬೇಡಿ ಎಂದು ಸಲಹೆ ನೀಡಿದಾಗ ಆ ವಿಚಾರವಾಗಿ ಈಗಾಗಲೇ ಮೋಸ ಹೋಗಿದ್ದೇವೆಂದು ಸಿಬ್ಬಂದಿ ಹೇಳಿದರು.

## ಅರಕಲಗೂಡು: ಕಾಡಾನೆ ದಾಳಿಗೆ ಅಪಾರ ಬೆಳೆ ಹಾನಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಕಾಡಾನೆಗಳ ದಿಢೀರ್ ದಾಳಿಯಿಂದ ಶುಂಠಿ, ರಾಗಿ ಸೇರಿ ವಿವಿಧ ಬೆಳೆಗಳು ನಾಶವಾಗಿರುವ ಘಟನೆ ಮಲ್ಲಿಪಟ್ಟಣ ಹೋಬಳಿಯ ಕಾಡಂಚಿನ ಅಬ್ಬೂರು ಹಾಗೂ ಪಾರಸನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಬೆಳೆ ಹಾನಿಯಾಗಿರುವ ಅಬ್ಬೂರು ಗ್ರಾಮಕ್ಕೆ ಅರಣ್ಯ ಇಲಾಖೆ ಸಿಬ್ಬಂದಿ ಶನಿವಾರ ಭೇಟಿ ನೀಡಿ ಪರಿಶೀಲಿಸಿದರು. ರೈತರು ಕಷ್ಟಪಟ್ಟು ಬೆಳೆದ ಬೆಳೆಗಳು ಕಾಡಾನೆಗಳ ದಾಳಿಗೆ ತುತ್ತಾಗುತ್ತಿರುವುದು ತಲೆನೋವಾಗಿದೆ. ಕಳೆದ ಕೆಲ ತಿಂಗಳಿನಿಂದ ಕಾಡಿನಿಂದ ನಾಡಿನತ್ತ ಬರುತ್ತಿರುವ ಕಾಡಾನೆಗಳ ಹಿಂಡು ರಾತ್ರಿ ವೇಳೆ ಕೃಷಿ ಜಮೀನುಗಳಿಗೆ ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾನಿ ಉಂಟುಮಾಡುತ್ತಿದೆ. ಅಬ್ಬೂರು ಮತ್ತು ಪಾರಸನಹಳ್ಳಿ ಗ್ರಾಮದ ಹಲವು ರೈತರ ಜಮೀನುಗಳಿಗೆ ನುಗ್ಗಿದ ಕಾಡಾನೆಗಳು ಶುಂಠಿ ತೋಟಗಳನ್ನು ತುಳಿದು ನಾಶಪಡಿಸಿದ್ದು, ರಾಗಿ ಬೆಳೆಗೂ ಹಾನಿ ಉಂಟುಮಾಡಿವೆ. ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿರುವುದಾಗಿ ರೈತರು ಅಳಲು ತೋಡಿಕೊಂಡಿದ್ದಾರೆ.

ಶುಂಠಿ ಬೆಳೆಗೆ ರೈತರು ಹೆಚ್ಚಿನ ವೆಚ್ಚ ಮಾಡಿ ಬೆಳೆ ಬೆಳೆದಿದ್ದರೂ, ಕಟಾವಿಗೆ ಬಂದ ಹಂತದಲ್ಲಿ ಕಾಡಾನೆಗಳ ದಾಳಿಯಿಂದ ಬೆಳೆ ಹಾನಿಗೊಳಗಾಗಿರುವುದು ರೈತರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸಿದೆ. ಮಳೆಗಾಲದ ಆರಂಭದಲ್ಲೇ ಇಂತಹ ಘಟನೆಗಳು ಮರುಕಳಿಸುತ್ತಿರುವುದರಿಂದ ರೈತರು ರಾತ್ರಿ ನಿದ್ರೆ ಬಿಟ್ಟು ಜಮೀನುಗಳ ಕಾವಲು ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ.

## ಸಿಆರ್‌ಪಿಎಫ್ ಯೋಧ ರಂಗಸ್ವಾಮಿ ಅಂತ್ಯಕ್ರಿಯೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ತಾಲ್ಲೂಕಿನ ಮಾದಿಹಳ್ಳಿ ಗ್ರಾಮದ ನಿವೃತ್ತ ಸಿಆರ್‌ಪಿಎಫ್ ಯೋಧ ರಂಗಸ್ವಾಮಿ (56) ಅವರ ಅಂತ್ಯಕ್ರಿಯೆ ಶನಿವಾರ ಮನಿಗನಹಳ್ಳಿ ಗ್ರಾಮದಲ್ಲಿ ನೆರವೇರಿತು.

ಅನಾರೋಗ್ಯದಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಶುಕ್ರವಾರ ನಿಧನರಾಗಿದ್ದರು. ಭಾರತೀಯ ಸೇನೆಯಲ್ಲಿ ಸುಮಾರು 20 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದ ರಂಗಸ್ವಾಮಿ, ಜಮ್ಮು-ಕಾಶ್ಮೀರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ಉಗ್ರರ ವಿರುದ್ಧ ನಡೆದ ಕಾಳಗದಲ್ಲಿ ಶೌರ್ಯ ಪ್ರದರ್ಶಿಸಿದ್ದರು. ಉಗ್ರರ ಗುಂಡಿನ ದಾಳಿಯಲ್ಲಿ ಒಂಬತ್ತು ಗುಂಡುಗಳು ದೇಹಕ್ಕೆ ತಗುಲಿದ್ದರೂ ಛಲ ಬಿಡದೆ ಹೋರಾಟ ಮುಂದುವರಿಸಿ ಇಬ್ಬರು ಉಗ್ರರನ್ನು ಹೊಡೆದುರುಳಿಸಿದ್ದರು.

ಈ ವೇಳೆ ಗಂಭೀರವಾಗಿ ಗಾಯಗೊಂಡ ಅವರು ಎರಡು ಕಾಲುಗಳನ್ನು ಕಳೆದುಕೊಂಡಿದ್ದರು. ಬಳಿಕ ಕಿಡ್ನಿ ವೈಫಲ್ಯಕ್ಕೂ ಒಳಗಾದರೂ ಜೀವನೋತ್ಸಾಹ ಕಳೆದುಕೊಳ್ಳದೆ ನಿವೃತ್ತಿಯ ನಂತರ ಸುಮಾರು 23 ವರ್ಷಗಳ ಕಾಲ ಸಾರ್ಥಕ ಬದುಕು ನಡೆಸಿದರು. ದೆಹಲಿಯ ಏಮ್ಸ್ ಆಸ್ಪತ್ರೆಯಲ್ಲಿ ಹಲವು ವರ್ಷ ಚಿಕಿತ್ಸೆ ಪಡೆದರೂ ಆರೋಗ್ಯ ಸುಧಾರಿಸದ ಹಿನ್ನಲೆಯಲ್ಲಿ ಸ್ವಯಂ ನಿವೃತ್ತಿ ಪಡೆದಿದ್ದರು.

ದೇಶ ಸೇವೆಯಲ್ಲಿ ತೋರಿದ ಅಪ್ರತಿಮ ಶೌರ್ಯಕ್ಕೆ ಅವರಿಗೆ ರಾಷ್ಟ್ರಪತಿ ಪೊಲೀಸ್ ಪದಕ ಪ್ರದಾನವಾಗಿದ್ದು, ಈ ಗೌರವ ಪಡೆದ ಜಿಲ್ಲೆಯ ಮೊದಲ ಯೋಧ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ನಿವೃತ್ತಿಯ ಬಳಿಕ ಕೃಷಿಯಲ್ಲಿ



ನಿರತರಾಗಿದ್ದರು. ರಾಷ್ಟ್ರಪತಿ ಮಟ್ಟದ ಗೌರವ ಪಡೆದಿದ್ದ ಯೋಧರ ಅಂತ್ಯಕ್ರಿಯೆ ವೇಳೆ ಜಿಲ್ಲಾ ಪೊಲೀಸ್ ಇಲಾಖೆ ಅಧಿಕೃತ ಗೌರವ ಸಲ್ಲಿಸದಿರುವುದು ಬೇಸರದ ಸಂಗತಿ ಎಂದು ನಿವೃತ್ತ ಅರೆಸೇನಾ ಸೈನಿಕರ ಸಂಘದ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.

ದೇಶಕ್ಕಾಗಿ ಜೀವವನ್ನೇ ಪಣಕ್ಕಿಟ್ಟ ಯೋಧರಿಗೆ ಸರ್ಕಾರ ಹಾಗು ಸಂಬಂಧಿತ ಇಲಾಖೆಗಳು ಸೂಕ್ತ ಗೌರವ ಸಲ್ಲಿಸಬೇಕಿತ್ತು ಎಂದು ಅಸಮಾಧಾನ ಹೊರಹಾಕಿದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ದೇಶದ ರಕ್ಷಣೆಗೆ ಜೀವನವನ್ನೇ ಮುಡಿಪಾಗಿಟ್ಟ ವೀರ ಯೋಧರ ಸೇವೆ ಸದಾ ಸ್ಮರಣೀಯ. ಇಂತಹ ಮಹನೀಯರ ತ್ಯಾಗ, ಸಾಹಸ ಮತ್ತು ದೇಶಭಕ್ತಿ ಮುಂದಿನ ಪೀಳಿಗೆಗೆ ಪ್ರೇರಣೆಯಾಗಬೇಕು. ಸಮಾಜ ಇಂತಹ ವೀರರನ್ನು ಎಂದಿಗೂ ಮರೆಯಬಾರದು ಎಂದು ಹೇಳಿದರು

## ಜಮೀನು ವ್ಯಾಜ್ಯ ದೊಡ್ಡಪ್ಪನ ಮಗನ ಮೇಲೆ ಹಲ್ಲೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಜಮೀನು ವ್ಯಾಜ್ಯ ಹಿನ್ನಲೆಯಲ್ಲಿ ಸೋದರ ಸಂಬಂಧಿ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ತಾಲೂಕಿನ ನಲ್ಲೂರು ಗ್ರಾಮದಲ್ಲಿ ನಡೆದಿದೆ.

ಕಿರಣ್ ಎಂಬಾತನ ಮೇಲೆ ಸೋದರ ಸಂಬಂಧಿ ಸೋಮಶೇಖರ್ ಹಲ್ಲೆ ನಡೆಸಿದ್ದಾನೆ.

ನಿಂಗರಾಜ್ ಪುತ್ರ ಕಿರಣ್ ಮೇಲೆ ಅಣ್ಣ ಯೋಗಿಶ್ ಪುತ್ರ ಸೋಮಶೇಖರ್ ಮಚ್ಚಿನಿಂದ ಕೊಚ್ಚಿ ಗಂಭೀರವಾಗಿ ಹಲ್ಲೆ ನಡೆಸಿದ್ದಾನೆ. ಕಿರಣ್, ಸೋಮಶೇಖರ್ ಕುಟುಂಬಗಳಿಗೆ ನಲ್ಲೂರಿನಲ್ಲಿ

5 ಎಕರೆ ಜಮೀನು ಇದ್ದು, ಈ ಜಮೀನನ್ನು ಪಾಲು ಮಾಡಿಕೊಳ್ಳುವ




ವಿಚಾರದಲ್ಲಿ ಅಣ್ಣ ನಿಂಗರಾಜ್ ಮತ್ತು ತಮ್ಮ ಯೋಗೀಶ್ ನಡುವೆ ಜಗಳ ಶುರುವಾಗಿತ್ತು. ಹಂಚಿಕೆ ಮಾಡುವುದು ಮುಗಿಯುವ ಮುನ್ನವೇ ಜಮೀನು ಒತ್ತುವರಿ ಮಾಡಿ ಉಳುಮೆ ಮಾಡಲು ಸೋಮಶೇಖರ್ ಮುಂದಾಗಿದ್ದ. ಮಾತ್ರವಲ್ಲ ಟ್ರ್ಯಾಕ್ಟರ್ ನಲ್ಲಿ ಜಮೀನು ಉಳುಮೆ ಮಾಡುತ್ತಿದ್ದ. ಹಂಚಿಕೆ ಪ್ರಕ್ರಿಯೆ ಮುಗಿಯದೆ ಭೂಮಿ ಉಳುಮೆ ಮಾಡುತ್ತಿದ್ದ ಚಿಕ್ಕಪ್ಪನ ಮಗ ಸೋಮಶೇಖರ್‌ನನ್ನು ಕಿರಣ್ ಪ್ರಶ್ನೆ ಮಾಡಿದ್ದಾನೆ.

ಇಷ್ಟನ್ನೇ ಕುಪಿತನಾದ ಸೋಮಶೇಖರ್, ಟ್ರ್ಯಾಕ್ಟರ್‌ನಲ್ಲಿ ಮೊದಲೇ ಹೊಂದಿಸಿ ಇಟ್ಟುಕೊಂಡಿದ್ದ ಮಚ್ಚಿನಿಂದ ಹಲ್ಲೆ ನಡೆಸಿದ್ದಾನೆ. ಸಂಬಂಧಿಕರು ದೌಡಾಯಿಸಿ ಬಂದು ಕಿರಣ್‌ನನ್ನು ಹಾಸನದ ಹಿಮ್ಸ್ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ.

ಗಾಯಾಳು ಕಿರಣ್ ತಂದೆ ನಿಂಗರಾಜ್ ಅವರು ನೀಡಿದ ದೂರು ಆಧರಿಸಿ ಆಲೂರು ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ.

## ಜೆಡಿಎಸ್ ತೊರೆದು ಕಾಂಗ್ರೆಸ್ ಸೇರ್ಪಡೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಾಲ್ಲೂಕಿನ ಗಂಡಸಿ ಹೋಬಳಿ ಕೊಂಡೆನಾಳು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಬ್ಯಾಂಕ್‌ನ ನಿರ್ದೇಶಕ ನಂಜೇಗೌಡ (ರೂಪೇಶ್) ಅವರು ಜೆಡಿಎಸ್ ಪಕ್ಷ ತೊರೆದು ಕಾಂಗ್ರೆಸ್ ಸೇರಿದರು.

ಶಾಸಕ ಕೆ.ಎಂ ಶಿವಲಿಂಗೇಗೌಡ ಅವರ ಅಭಿವೃದ್ಧಿ ಹಾಗೂ ಜನಪರ ಕೆಲಸ ಕಾರ್ಯ ಮೆಚ್ಚಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

## ಅಗಲಿದ ನಾಯಕರಿಗೆ ಮಾದಿಗ ದಂಡೋರ ನುಡಿ ನಮನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಸ್ವಾಭಿಮಾನಿ ಭವನದಲ್ಲಿ ಕರ್ನಾಟಕ ಮಾದರ ಮಹಾಸಭಾ, ಮಾದಿಗ ದಂಡೋರ, ಕರ್ನಾಟಕ ಮಾದರ ನೌಕರರ ಸಂಘ ಹಾಗೂ ಸಮಾಜದ ವಿವಿಧ ಸಂಘಟನೆಗಳ ಒಕ್ಕೂಟದ ವತಿಯಿಂದ ಕಾಫಿ ಪುಡಿ ರಾಜಣ್ಣ ಹಾಗೂ ಕ್ರೀಡಾಪಟು ಕಾರ್ತಿಕ್ ಅವರ ಸ್ಮರಣಾರ್ಥ ಶನಿವಾರ ನುಡಿ ನಮನ ಹಮ್ಮಿಕೊಳ್ಳಲಾಗಿತ್ತು.

ಮಾದಿಗ ದಂಡೋರ ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ಆರ್. ವಿಜಯಕುಮಾರ್ ಮಾತನಾಡಿ, 2002ರಲ್ಲಿ ಜಿಲ್ಲೆಯಲ್ಲಿ ಮಾದಿಗ ದಂಡೋರ ಚಳವಳಿಗೆ ಅಧಿಕೃತ ಚಾಲನೆ ದೊರೆತಿದ್ದು, ಅಂದಿನಿಂದ ಸಂಘಟ ಕಟ್ಟುವಲ್ಲಿ ಹಲವಾರು ಮುಖಂಡರು ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಹೇಳಿದರು.

ಕಳೆದ 16 ವರ್ಷಗಳಲ್ಲಿ ಸಮಾಜದ ಸಂಘಟನೆಗಾಗಿ ಶ್ರಮಿಸಿದ ಹಲವು ಚೇತನಗಳನ್ನು ನಾವು ಕಳೆದುಕೊಂಡಿದ್ದು, ಮೊದಲ ಅಧ್ಯಕ್ಷ ಎನ್.ಸಿ. ಮರಿಯಪ್ಪ, ಚನ್ನಯ್ಯ, ಶಿವಮ್ಮ ಸಾಲಿ, ತ್ಯಾಗಿ ಅವರ ಅಳಿಯ ವೀರಪ್ಪ ಹಾಗೂ ಇದೀಗ ಅನ್ನದಾತ ಕಾಫಿಪುಡಿ ರಾಜಣ್ಣ ಅವರ ನಿಧನದಿಂದ




ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

1999ರಲ್ಲಿ ಚಳವಳಿ ಬಲಪಡಿಸಲು ರಾಜಣ್ಣ ಅವರು ವಹಿಸಿದ್ದ ಪಾತ್ರ ಸ್ಮರಿಸಿದ ವಿಜಯಕುಮಾರ್, ಸಮಾಜದ ಯಾವುದೇ ಕಾರ್ಯಕ್ರಮ ನಡೆದರೂ ರಾಜಣ್ಣ ಅವರು ಪತ್ನಿ ಹಾಗೂ ಮಕ್ಕಳೊಂದಿಗೆ ಆಗಮಿಸಿ ಊಟದ ವ್ಯವಸ್ಥೆ ಮಾಡುವುದರ ಜೊತೆಗೆ ಆರ್ಥಿಕ ಸಹಾಯ ನೀಡುತ್ತಿದ್ದರು. ಕೇಳದಿದ್ದರೂ ಸಮಾಜದ ಮೇಲಿನ ಕಾಳಜಿಯಿಂದ ನೆರವು ನೀಡುತ್ತಿದ್ದ ಅವರ ಉದಾರ ಮನೋಭಾವ ಎಲ್ಲರಿಗೂ ಮಾದರಿ ಎಂದು ಹೇಳಿದರು.

ಅನ್ನ ಹಾಕುವುದರಲ್ಲಿ ಅವರೇ ಶ್ರೀಮಂತರು ಎಂದು ಭಾವುಕರಾಗಿ ನುಡಿದರು.

ಕ್ರೀಡಾಪಟು ಕಾರ್ತಿಕ್, ಕ್ರೀಡಾ ಕ್ಷೇತ್ರದಲ್ಲಿ ತಮ್ಮದೇ ಸಾಧನೆ ಹಾಗೂ ಪ್ರತಿಭೆಯಿಂದ ಗುರುತಿಸಿಕೊಂಡು ಯುವಜನತೆಗೆ ಸ್ಫೂರ್ತಿಯಾಗಿದ್ದರು ಎಂದರು. ಈ ಇಬ್ಬರ ಸಮಾಜಮುಖಿ ವ್ಯಕ್ತಿತ್ವಗಳನ್ನು ಸ್ಮರಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದ್ದು, ಅವರ ಸೇವೆ ಮತ್ತು ಸಾಧನೆ ಸದಾ ನೆನಪಿನಲ್ಲಿ ಉಳಿಯಲಿವೆ ಎಂದರು.

ಬೇಲೂರಿನ ಚಂದನಕುಮಾರ್ ಮೆಲೋಡಿಸ್ ತಂಡದ ಸಂಗಮ ಸಂಗೀತ ಹಾಗೂ ಕ್ರಾಂತಿ ಗೀತೆಗಳ ಗಾಯನ ಗಮನ ಸೆಳೆಯಿತು.ಈ ವೇಳೆ ಜಿಲ್ಲಾ ಮಾದರ ನೌಕರರ ಸಂಘದ ಅಧ್ಯಕ್ಷ ಹೆಚ್.ಆರ್. ಯಶೋಧರ, ನಿವೃತ್ತ ಡಿಡಿಪಿಐ ಎನ್.ಡಿ. ಸಾಲಿ, ಕೆ.ಎಂ. ನಾಗರಾಜು, ದಲಿತ ಹಿರಿಯ ಮುಖಂಡ ಹೆಚ್.ಕೆ. ಸಂದೇಶ್, ಎಚ್ ಡಿಸಿಸಿ ಬ್ಯಾಂಕ್ ನಿವೃತ್ತ ವ್ಯವಸ್ಥಾಪಕ ಹೇಮಂತ್, ಎಸ್‌ಸಿ-ಎಸ್‌ಟಿ ನೌಕರರ ಸಂಘದ ದೊಡ್ಡಮಗ್ಗೆ ರಾಜೇಂದ್ರ, ಅರಸೀಕೆರೆ ತಾಪಂ ಮಾಜಿ ಅಧ್ಯಕ್ಷ ಗುತ್ತಿನಕೆರೆ ಶಿವಮೂರ್ತಿ, ಬಸವಾಪುರ ಆಡಳಿತ ಮಂಡಳಿ ಸದಸ್ಯ ರವೀಶ್, ಸುಬ್ಬಣ್ಣ ಶೆಟ್ಟಿ, ರಾಜಣ್ಣ ಅವರ ಪತ್ನಿ ಪುಟ್ಟಮ್ಮ ಮೊದಲಾದವರಿದ್ದರು.

# ದೇಶಾದ್ಯಂತ ಒಂದು ಕೋಟಿ ಬಾಲ ಕಾರ್ಮಿಕರು

## ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ | ಕಾನೂನು ಸೇವಾ ಸಮಿತಿ ಅಧ್ಯಕ್ಷೆ ಕಲ್ಪನಾ ಮಾಹಿತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ದೇಶಾದ್ಯಂತ 1 ಕೋಟಿ ಬಾಲ ಕಾರ್ಮಿಕರಿದ್ದು ಈ ಅನಿಷ್ಟ ಪದ್ಧತಿ ಶಾಶ್ವತವಾಗಿ ತೊಲಗಬೇಕೆಂದರೆ ಸಾರ್ವಜನಿಕರು ಎಚ್ಚೆತ್ತುಕೊಳ್ಳಬೇಕು ಎಂದು ತಾಲ್ಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷೆ ಎಂ.ಎಸ್.ಕಲ್ಪನಾ ತಿಳಿಸಿದರು.

ತಾಲ್ಲೂಕಿನ ಶೆಟ್ಟಿಹಳ್ಳಿ ಗ್ರಾಮದಲ್ಲಿರುವ ನಂದಿನಿ ಹೈಟೆಕ್ ಉತ್ಪನ್ನ ಘಟಕದಲ್ಲಿ ತಾಲ್ಲೂಕು ಕಾನೂನು ಸೇವೆಗಳ ಸಮಿತಿ, ತಾಲೂಕು ವಕೀಲರ ಸಂಘ ಹಾಗೂ ಶೆಟ್ಟಿಹಳ್ಳಿ ನಂದಿನಿ ಹೈಟೆಕ್ ಉತ್ಪನ್ನ ಘಟಕದಿಂದ ಆಯೋಜಿಸಿದ್ದ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯಲ್ಲಿ ಮಾತನಾಡಿ, ಕೇವಲ ದಿನಾಚರಣೆ ಆಚರಿಸಿ ಜಾಗೃತಿ ಮೂಡಿಸಿದರಷ್ಟೇ ಈ ಅನಿಷ್ಟ ಪದ್ಧತಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ. ಅದರ ಬದಲು ಮಕ್ಕಳು ದೇಶದ ಆಸ್ತಿ ಅವರ ಭವಿಷ್ಯಕ್ಕಾಗಿ ಉತ್ತಮ ಶಿಕ್ಷಣ ನೀಡಬೇಕೆಂಬ ಮನಸ್ಥಿತಿ ಎಲ್ಲರಲ್ಲಿ ಬರಬೇಕಿದೆ ಎಂದು ತಿಳಿಸಿದರು.



ಭಾರತದ ಸಂವಿಧಾನ ಸಹ 6 ರಿಂದ 14ನೇ ವಯಸ್ಸಿನ ವರೆಗೆ ಮಕ್ಕಳಿಗೆ ಕಡ್ಡಾಯ ಶಿಕ್ಷಣ ನೀಡಲು ನಿಬಂಧನೆ ವಿಧಿಸಿದೆ. ಅದರಂತೆ ಸರ್ಕಾರ ಶಾಲೆಗಳಲ್ಲಿ ಬಿಸಿಯೂಟ ಮತ್ತಿತರ ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಿದೆ. ಬಾಲ ಕಾರ್ಮಿಕ ಪದ್ಧತಿ ತಡೆಗೆ ಸರ್ಕಾರ ಹಲವು ಸೌಲಭ್ಯ ಒದಗಿಸುವುದರ ಜೊತೆಗೆ ನೂರಾರು ಕಾನೂನು ಮಾಡಬಹುದು. ಆದರೆ, ಮಕ್ಕಳನ್ನು ಉತ್ತಮ ನಾಗರಿಕರನ್ನಾಗಿಸುವ ಹೊಣೆಯಿಂದ ಪಾಲಕರು ತಪ್ಪಿಸಿಕೊಂಡರೆ ಸರ್ಕಾರದ ಆಶಯ ಈಡೇರಲಾರದು ಎಂದು ಅಭಿಪ್ರಾಯಪಟ್ಟರು.

ಅನಕ್ಷರತೆ ಮತ್ತು ಆರ್ಥಿಕ ಸಮಸ್ಯೆಯೇ ಬಾಲಕಾರ್ಮಿಕ ಪದ್ಧತಿಗೆ ಮೂಲ ಕಾರಣವಾಗಿದ್ದು, ಸರ್ಕಾರ ಒದಗಿಸಿರುವ ಸೌಲಭ್ಯಗಳನ್ನು ವಿವಿಧ ಇಲಾಖೆಗಳು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವ ಮೂಲಕ ಮಕ್ಕಳ ಸರ್ವಾಂಗೀಣ ವಿಕಸನಕ್ಕೆ ಮಾರಕವಾಗಿರುವ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸಿ ಸಮಾಜದ ಅನಿಷ್ಟ ಪದ್ಧತಿಯಾದ ಬಾಲಕಾರ್ಮಿಕತೆ ಕೊನೆಗೊಳಿಸಿ ದೇಶದ ಆಸ್ತಿಯಾದ ಮಕ್ಕಳ ಜೀವನವನ್ನು ಉಜ್ವಲಗೊಳಿಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ ಎಂದರು.

ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಡಿ.ಕೆ.ಹರೀಶ್ ಅವರು, ಬಾಲ್ಯಾವಸ್ಥೆ ಹಾಗು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1996 ಕುರಿತು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, 2016-17ರಲ್ಲಿ ಬಾಲ ಕಾರ್ಮಿಕ ಕಾಯ್ದೆಗೆ ತಿದ್ದುಪಡಿ ತರಲಾಗಿದೆ.

ಈ ಕಾಯ್ದೆಯಲ್ಲಿ ಅಪಾಯಕಾರಿ ಅಲ್ಲದ ಕ್ಷೇತ್ರದಲ್ಲಿ ಕುಟುಂಬದೊಂದಿಗೆ ಶಾಲೆ ವೇಳೆ ಹೊರತುಪಡಿಸಿ ಹಾಗು ರಜಾ ದಿನಗಳಲ್ಲಿ ಮಕ್ಕಳು ಕೆಲಸ ಮಾಡಲು ಅವಕಾಶ ನೀಡಲಾಗಿದೆ ಎಂದರು.

ಅಲ್ಲದೆ ಅಪಾಯಕಾರಿ ಕ್ಷೇತ್ರದಲ್ಲಿ ಕಾಯ್ದೆಗೆ ವಿರುದ್ಧವಾಗಿ ಮಕ್ಕಳನ್ನು ಕೆಲಸಕ್ಕೆ ತೆಗೆದುಕೊಂಡರೆ ಅಂತಹ ಮಾಲೀಕರು ಮತ್ತು ಪೋಷಕರ ವಿರುದ್ಧ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಿ 25-50 ಸಾವಿರ ರೂ. ದಂಡ ಮತ್ತು 6 ತಿಂಗಳ ಶಿಕ್ಷೆ ನೀಡಬೇಕೆಂದು ಕಾಯ್ದೆಯಲ್ಲಿ ಸ್ಪಷ್ಟವಾಗಿ ಸೂಚಿಸಲಾಗಿದೆ. ಮಕ್ಕಳನ್ನು ದುಡಿಸಿಕೊಳ್ಳುವುದು ಅಪರಾಧವಾಗಿದ್ದು, ಯಾರೇ ಬಾಲಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯಿದೆಯನ್ನು ಉಲ್ಲಂಘಿಸಿದರೆ ಆರು ತಿಂಗಳಿಂದ ಎರಡು ವರ್ಷದವರೆಗೆ ಶಿಕ್ಷೆ, ದಂಡ ವಿಧಿಸಲಾಗುತ್ತದೆ. ಹಾಗೆಯೇ ಪೋಷಕರಿಗೂ ಶಿಕ್ಷೆ ಆಗಲಿದೆ. ಬಾಲಕಾರ್ಮಿಕ ಪದ್ಧತಿ ಬಗ್ಗೆ ಅರಿವು ಮೂಡಿಸಬೇಕು ಎಂದು ಅವರು ತಿಳಿಸಿದರು.

ನಂದಿನಿ ಹೈಟೆಕ್ ಉತ್ಪನ್ನ ಘಟಕದ ನಿರ್ದೇಶಕ ಪಿ.ಹೆಚ್.ರಂಗಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ತಾಲ್ಲೂಕು ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿ ವಿ.ಕುಸುಮ, ತಾಲ್ಲೂಕು ವಕೀಲರ ಸಂಘದ ಉಪಾಧ್ಯಕ್ಷ ಡಿ.ಪಿ.ದಿನೇಶ್, ಕಾರ್ಯದರ್ಶಿ ಸಿ.ಬಿ.ಹೇಮಂತ್ ಕುಮಾರ್, ಖಜಾಂಚಿ ಕೆ.ಎಲ್.ಚೇತನ್, ಜಂಟಿ ಕಾರ್ಯದರ್ಶಿ ಹೆಚ್.ಎಂ.ಸುಶ್ಮಿತಾ, ಲಕ್ಕಪ್ಪ, ಡಿ.ಎಂ. ಮುನಿರತ್ನಮ್ಮ ಇದ್ದರು.

# ರಾಮನಾಥಪುರದಲ್ಲಿ ಮಕ್ಕಳಿಗೆ ಅಕ್ಷರಾಭ್ಯಾಸ



ರಾಮನಾಥಪುರ: ಹೊಸದಾಗಿ ದಾಖಲಾದ ವಿದ್ಯಾರ್ಥಿಗಳಿಗೆ ಅಕ್ಷರಾಭ್ಯಾಸ ರಾಮನಾಥಪುರದ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿರುವ ಮಕ್ಕಳ ಮನೆಯಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ಮಕ್ಕಳಿಗೆ ತಾಯಂದಿರು ಹಾಗೂ ಪೋಷಕರ ಸಮ್ಮುಖದಲ್ಲಿ ಅಕ್ಷರಾಭ್ಯಾಸ ಮಾಡಿಸಲಾಯಿತು. ಶಾಲೆಯ ಮುಖ್ಯ ಶಿಕ್ಷಕ ಮಹೇಶ್ ಮಾತನಾಡಿ, ಪುಟಾಣಿ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ದೇಶಕ್ಕೆ ಕೀರ್ತಿ ತರುವ ಪ್ರಜೆಗಳಾಗಿ ಬೆಳೆಯಲಿ. ಮಕ್ಕಳ ಮನೆಗೆ ಪೋಷಕರಿಂದ ಉತ್ತಮ ಸ್ಪಂದನೆ ದೊರೆಯುತ್ತಿದ್ದು, ದಾಖಲಾತಿಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಹೆಸರು ನೋಂದಾಯಿಸುತ್ತಿರುವುದು ಸಂತಸದ ವಿಚಾರ ಎಂದು ಹೇಳಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಎನ್.ಕುಮಾರಸ್ವಾಮಿ ಮಾತನಾಡಿ, ಎರಡು ವರ್ಷಗಳ ಹಿಂದೆ ರಾಮನಾಥಪುರ ಹೋಬಳಿಯಲ್ಲಿ ಆರಂಭವಾದ ಮಕ್ಕಳ ಮನೆಯಲ್ಲಿ ಪ್ರಸ್ತುತ, ತಾಲ್ಲೂಕಿನ 18 ಕೇಂದ್ರಗಳಿಗೆ ವಿಸ್ತರಿಸಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಹೊಸ ಕ್ರಾಂತಿಗೆ ಕಾರಣವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾವೇರಿ ನದಿ ಸ್ವಚ್ಛತಾ ಆಂದೋಲನ ಸಮಿತಿ ಅಧ್ಯಕ್ಷ ಸಿದ್ದರಾಜು, ಮಾಜಿ ನೌಕರರ ಸಂಘದ ಕಾರ್ಯದರ್ಶಿ ಎಂ.ಆರ್. ದೇವರಾಜು ಮಾತನಾಡಿ, ಗ್ರಾಮೀಣ ಭಾಗದ ರೈತ ಕುಟುಂಬಗಳಿಗೆ ಮಕ್ಕಳ ಮನೆ ಯೋಜನೆ ವರದಾನವಾಗಿದ್ದು, ಖಾಸಗಿ ಶಾಲೆಗಳ ವೆಚ್ಚದ ಹೊರೆಯನ್ನು ಕಡಿಮೆ ಮಾಡುವಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಕ್ಕಳ ಮನೆ ಶಿಕ್ಷಕಿಯರಾದ ಗೀತಾ, ತನುಜ ಹಾಗೂ ವಿದ್ಯಾರ್ಥಿಗಳ ಪೋಷಕರು ಭಾಗವಹಿಸಿದ್ದರು.

# ಜೂ.30ರಿಂದ ಎಸ್ ಐಆರ್ ಮಹಾ ಅಭಿಯಾನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಮತದಾರರ ಪಟ್ಟಿಯನ್ನು ಸಂಪೂರ್ಣ ದೋಷಮುಕ್ತ ಹಾಗೂ ಆಧುನಿಕಗೊಳಿಸುವ ಉದ್ದೇಶದಿಂದ ಚುನಾವಣಾ ಆಯೋಗದ ನಿರ್ದೇಶನದಂತೆ ಜೂ. 30ರಿಂದ ಜು. 29ರ ವರೆಗೆ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಮಹಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಹಶೀಲ್ದಾರ್ ಎಂ.ಜೆ.ಸಂತೋಷ್ ಕುಮಾರ್ ತಿಳಿಸಿದರು.

ತಾಲ್ಲೂಕು ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಅವಧಿಯಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್ಒ) ಮನೆ-ಮನೆಗೆ ಭೇಟಿ ನೀಡಿ ಮತದಾರರ ಮಾಹಿತಿ ಸಂಗ್ರಹಿಸಲಿದ್ದು, ಹೊಸ ಮತದಾರರ ಸೇರ್ಪಡೆ, ತಿದ್ದುಪಡಿ ಹಾಗು ಅನರ್ಹ ಮತದಾರರ ಹೆಸರು ಕೈಬಿಡುವ ಕಾರ್ಯ ಕೈಗೊಳ್ಳಲಿದ್ದಾರೆ ಎಂದರು.

ಆ.5ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದ್ದು, ಸೆ.4ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ. ಅ.7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಗೊಳ್ಳಲಿದೆ. ತಾಲ್ಲೂಕಿನ 325 ಮತಗಟ್ಟೆಗಳಲ್ಲಿ ಪರಿಷ್ಕರಣೆ ಕಾರ್ಯ ನಡೆಯಲಿದ್ದು, ಒಟ್ಟು 2,65,365 ಮತದಾರರು ವ್ಯಾಪ್ತಿಗೆ ಒಳಪಡಲಿದ್ದಾರೆ. ಮತದಾರರ ಅನುಕೂಲಕ್ಕಾಗಿ ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಸಹಾಯ ಕೇಂದ್ರಗಳನ್ನು ತೆರೆಯಲಾಗಿದ್ದು, ವಯೋವೃದ್ಧರು, ಅಂಗವಿಕಲರು, ಅನಾರೋಗ್ಯ ಪೀಡಿತರಿಗೆ ವಿಶೇಷ ನೆರವು ಒದಗಿಸಲಾಗುತ್ತಿದೆ ಎಂದರು.

ಮತಗಟ್ಟೆ ಅಧಿಕಾರಿಗಳಿಗೆ ಜೂ. 20 ರಿಂದ 25ರ ವರೆಗೆ ವಿಶೇಷ ತರಬೇತಿ ನೀಡಲಾಗುವುದು. ಸಾರ್ವಜನಿಕರು ಈ ಮಹಾ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸಿ ಸಹಕರಿಸುವಂತೆ ಮನವಿ ಮಾಡಿದರು. ತಹಶೀಲ್ದಾರ್ ಗ್ರೇಡ್-2 ಪಾಲಾಕ್ಷ, ಚುನಾವಣಾ ವಿಭಾಗದ ಶಿರಸ್ತೇದಾರ್ ಹೇಮಾ ಉಪಸ್ಥಿತರಿದ್ದರು.

# ಕಿತ್ತಾವರ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ: ಆಕ್ರೋಶ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲ್ಲೂಕಿನ ಅರೇಹಳ್ಳಿ ಹೋಬಳಿ ಅನುಘಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಿತ್ತಾವರ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ಮಿತಿ ಮೀರಿದ್ದು ಕಡಿವಾಣ ಹಾಕಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಹೆಗ್ಗಡಿಹಳ್ಳಿ ಗ್ರಾಮಸ್ಥ ಜಗದೀಶ್ ಮಾತನಾಡಿ, ಕಿತ್ತಾವರ ಗ್ರಾಮದ ಅಂಗಡಿ ಹಾಗು ಮನೆಗಳಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿದೆ. ಅದರಿಂದ ಬಡಕುಟುಂಬಗಳು ಹಾಳಾಗುತ್ತಿವೆ. ಯುವಕರು ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ಕುಡಿದೇ ಕೆಲಸಕ್ಕೆ ತೆರಳುತ್ತಿರುವ ಕಾರ್ಮಿಕರು ಅಲ್ಲಿ ಸಂಭವಿಸುವ ಕೆಲ ದುರ್ಘಟನೆಗಳಿಂದ ಮೃತಪಟ್ಟ ಘಟನೆಯು ನಡೆದಿದೆ. ದೋಲನಮನೆ, ಹೆಗ್ಗಡಿಹಳ್ಳಿ, ಕಡೇನಹಳ್ಳಿಯಲ್ಲಿ ಮದ್ಯ ಮಾರಾಟವು ನಡೆಯದಿದ್ದರೂ ಕಿತ್ತಾವರದಲ್ಲಿ ಸಿಗುವ ಅಕ್ರಮ ಮದ್ಯದಿಂದ ಗ್ರಾಮಗಳ ನೆಮ್ಮದಿ ಹಾಳಾಗಿದೆ ಎಂದರು.

ದೋಲನಮನೆಯ ತಂಗರಾಜು ಮಾತನಾಡಿ, ಅಕ್ರಮ ಮದ್ಯ ಮಾರಾಟದ ವಿಚಾರ ಅರೇಹಳ್ಳಿ ಪೊಲೀಸ್ ಅಧಿಕಾರಿಗಳಿಗೆ ತಿಳಿದಿದ್ದರೂ ಯಾವುದೇ ಕ್ರಮ ಜರುಗಿಸಿಲ್ಲ. ಯುವಕರು ಕುಡಿತಕ್ಕೆ ದಾಸರಾಗುತ್ತಿದ್ದಾರೆ. ಅಕ್ಕ ಪಕ್ಕದ ಗ್ರಾಮಗಳು ಹಾಳಾಗಲು ಕಿತ್ತಾವರ ಗ್ರಾಮದ ಮದ್ಯ ಮಾರಾಟಗಾರರು ಕಾರಣರಾಗಿದ್ದಾರೆ. ತಕ್ಷಣವೇ ಅಕ್ರಮ ಮದ್ಯ ಮಾರಾಟಗಾರರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಕಿತ್ತಾವರ ಗ್ರಾಮದ ಕೆ.ಎಂ.ಕುಮಾರ್ ಮಾತನಾಡಿ, ಅಕ್ರಮ ಮದ್ಯ ಮಾರಾಟಗಾರರ ಸಂಪೂರ್ಣ ವಿವರ ಇದ್ದರೂ ಪೊಲೀಸರು ಕ್ರಮ ಜರುಗಿಸುತ್ತಿಲ್ಲ. ಶಾಲೆಯ ಆವರಣದಲ್ಲಿ ಖಾಲಿ ಪ್ಯಾಕೆಟ್‌ಗಳನ್ನು ಎಸೆಯುತ್ತಿರುವುದರಿಂದ ಇದು ವಿದ್ಯಾರ್ಥಿಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಸ್ಥಳೀಯವಾಗಿ ದೊರೆಯುತ್ತಿರುವ ಮದ್ಯದಿಂದ ವಿದ್ಯಾರ್ಥಿಗಳು ಕುಡಿದೇ ಶಾಲೆಗೆ ಹೋದ ಘಟನೆಯು ನಡೆದಿದ್ದು ಇದು ಮದ್ಯ ಮಾರಾಟದಿಂದ ಉಂಟಾಗುತ್ತಿರುವ ಗಂಭೀರ ಪರಿಣಾಮವಾಗಿದೆ. ಭವಿಷ್ಯದ ಪ್ರಜೆಗಳು ಕುಡಿತದ ಚಟಕ್ಕೆ ಬಲಿಯಾಗುತ್ತಿದ್ದಾರೆ ಎಂದರು.

# ಮಲೆನಾಡಿನ ರಸ್ತೆ ಸೇತುವೆ ಅಭಿವೃದ್ಧಿಗೆ ಕ್ರಮ: ಶಾಸಕ ಹೆಚ್.ಕೆ. ಸುರೇಶ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಮಲೆನಾಡು ಭಾಗದ ನಾರ್ವೆ ಪೇಟೆ ಹಾಗೂ ತುಂಬು ದೇವನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಸರ್ವತೊಮುಖ ಅಭಿವೃದ್ಧಿಗೆ ಅನುದಾನದ ಕೊರತೆಯಿಂದಾಗಿ ಕೆಲವು ರಸ್ತೆ ಹಾಗೂ ಸೇತುವೆ ಕಾಮಗಾರಿಗಳು ನನೆಗುದಿಗೆ ಬಿದ್ದಿದ್ದು ಅಗತ್ಯ ಇರುವ ಕಡೆ ತುರ್ತಾಗಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಶಾಸಕ ಹೆಚ್.ಕೆ. ಸುರೇಶ್ ತಿಳಿಸಿದರು.



ತಾಲೂಕಿನ ಅರೇಹಳ್ಳಿ ಹೋಬಳಿ ನಾರ್ವೆ ಪೇಟೆ ಗ್ರಾಮದಲ್ಲಿ ನವೀಕರಣಗೊಂಡಿರುವ ಬಸಮ್ಮ ಬಸವೇಗೌಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕಟ್ಟಡ ಹಾಗೂ ಆಯುಷ್ಮಾನ್ ಆರೋಗ್ಯ ಕೇಂದ್ರ, ಸರ್ಕಾರಿ ಯುನಾನಿ ಆಸ್ಪತ್ರೆ ಸೇರಿ ವಿವಿಧ ಅಭಿವೃದ್ಧಿ ಕಾಮಗಾರಿ ಉದ್ಘಾಟಿಸಿ ಮಾತನಾಡಿದರು.

ಗಡಿನಾಡಿನ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಗಳಲ್ಲಿ ಒಂದಾಗಿರುವ ಬಿರಡಹಳ್ಳಿ, ನಾರ್ವೆಪೇಟೆ, ಸೂಳೇಗುಡ್ಡ (ಬಿಎನ್‌ಎಸ್) ರಸ್ತೆಯ ಸೇತುವೆ ಮಳೆಗಾಲದಲ್ಲಿ ಪ್ರತಿವರ್ಷ ಮುಳುಗಡೆಯಾಗಿ ಸಂಚಾರಕ್ಕೆ ತೊಂದರೆಯಾಗುತ್ತಿತ್ತು. ಹೊಸ ಸೇತುವೆ ನಿರ್ಮಿಸುವಂತೆ ಈ ಭಾಗದ ರೈತರು ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳ ಹಲವು ವರ್ಷಗಳ ಬೇಡಿಕೆಗೆ ಸ್ಪಂದನೆ ದೊರೆತಿದ್ದು 4.77 ಕೋಟಿ ರೂ. ವೆಚ್ಚದ ಹೊಸ ಸೇತುವೆ ಕಾಮಗಾರಿಗೆ ಸರ್ಕಾರ ಅನುಮೋದನೆ ನೀಡಲಾಗಿದೆ. ಮಲೆನಾಡು ಅಭಿವೃದ್ಧಿ ಯೋಜನೆ ಅಡಿಯಲ್ಲಿ ಸಮೀಪದ ಅಬ್ಬಿಕಟ್ಟೆ ಹಾಗೂ ಕೋರಲಗದ್ದೆ ಗ್ರಾಮದ ಸೇತುವೆಗಳ ನಿರ್ಮಾಣಕ್ಕೂ ಪ್ರಸ್ತಾವನೆ ಸಲ್ಲಿಸಲಾಗಿದೆ.

ಸರ್ಕಾರಿ ಶಾಲೆಗಳ ಉನ್ನತೀಕರಣ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಮುಂದಾಗಿರುವ ಶಿಕ್ಷಣ ಇಲಾಖೆ ಅಗತ್ಯ ಇರುವ ಕಡೆ ಈಗಾಗಲೇ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲಾಗಿದ್ದು ಬಡ ಹಾಗೂ ಕೂಲಿ ಕಾರ್ಮಿಕರ ಮಕ್ಕಳೆ ಹೆಚ್ಚಾಗಿ ವಾಸಿಸುವ ಈ ಗ್ರಾಮದಲ್ಲೂ ಕೆಪಿಎಸ್ ಶಾಲೆ ತೆರೆಯಲು ಸಚಿವರೊಂದಿಗೆ ಚರ್ಚಿಸಲಾಗುವುದು ಎಂದರು.

ವಕೀಲ ವಿಜಯಕುಮಾರ್ ಮಾತನಾಡಿ, ಕನ್ನಡ ಶಾಲೆಗಳು ಉಳಿಯಬೇಕಾದರೆ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸಬೇಕು. 58 ವರ್ಷ ಇತಿಹಾಸ ಹೊಂದಿರುವ ಬಸಮ್ಮ ಬಸವೇಗೌಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ಸಮಾಜಕ್ಕೆ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪರಿಚಯಿಸುವ ಮೂಲಕ ದಾಖಲೆ ನಿರ್ಮಿಸಿದೆ. ಖಾಸಗಿ ಶಾಲೆಗಳಿಗಿಂತ ಸರ್ಕಾರಿ ಶಾಲೆಯಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ದೊರೆಯುತ್ತಿದ್ದು ವಿದ್ಯಾರ್ಥಿಗಳು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಭಾಗ್ಯಮ್ಮ, ವೈದ್ಯಾಧಿಕಾರಿ ಡಾ. ವೆಂಕಟೇಶ್, ಮುಖಂಡರಾದ ಶ್ರೀಕಾಂತ್, ವೆಂಕಟೇಶ್ ಮೂರ್ತಿ ಸುಲಗಳಲೆ, ಪಾಲಾಕ್ಷ, ದಿವಾಕರ್, ಚೇತನ್ ಕುಮಾರ್, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಉಮೇಶ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನಾಗಭೂಷಣ ಇತರರಿದ್ದರು.

# ಮಲೇರಿಯಾ ವಿರೋಧಿ ಮಾಸಾಚರಣೆಗೆ ಚಾಲನೆ



ಹಾಸನ: ಮಲೇರಿಯಾ ವಿರೋಧಿ ಮಾಸಾಚರಣೆ ಅಂಗವಾಗಿ ದುದ್ದ ಗ್ರಾಮದ ಪ್ರೌಢಶಾಲಾ ವಿಭಾಗದಿಂದ ಮಲೇರಿಯಾ ಜಾಗೃತಿ ಕಾರ್ಯಕ್ರಮ ಶಾಲಾ ವಿದ್ಯಾರ್ಥಿಗಳಿಂದ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ವಿಬಿಡಿಸಿ ಅಧಿಕಾರಿ ಡಾ. ಜಿ.ಎಸ್. ನಾಗಪ್ಪ ಚಾಲನೆ ನೀಡಿದರು.

ಮಲೇರಿಯಾ ಕಾರಣ, ಲಕ್ಷಣ, ಹರಡುವಿಕೆ ಹಾಗೂ ತಡೆಗಟ್ಟುವ ಕ್ರಮಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು. ಮನೆ ಮತ್ತು ಶಾಲೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡುವುದು, ನೀರು ನಿಲ್ಲದಂತೆ ನೋಡಿಕೊಳ್ಳುವುದು ಹಾಗೂ ಸೊಳ್ಳೆಗಳ ಉತ್ಪತ್ತಿ ಸ್ಥಳಗಳನ್ನು ನಿವಾರಿಸುವ ಕುರಿತು ಜಾಗೃತಿ ಮೂಡಿಸಲಾಯಿತು.

# ಇತಿಹಾಸದಲ್ಲಿ ಈ ದಿನ

## ಜೂನ್-14

1777: ಅಮೆರಿಕ ಸಂಯುಕ್ತ ಸಂಸ್ಥಾನದ ರಾಷ್ಟ್ರೀಯ ಧ್ವಜವನ್ನು ಅಧಿಕೃತವಾಗಿ ಅಂಗೀಕರಿಸಲಾಯಿತು.

1940: ದ್ವಿತೀಯ ವಿಶ್ವಯುದ್ಧದ ಸಂದರ್ಭದಲ್ಲಿ ಜರ್ಮನ್ ಪಡೆಗಳು ಫ್ರಾನ್ಸ್‌ನ ರಾಜಧಾನಿ ಪ್ಯಾರಿಸ್ ನಗರವನ್ನು ವಶಪಡಿಸಿಕೊಂಡವು.

1967: ಚೀನಾ ತನ್ನ ಮೊದಲ ಹೈಡ್ರೋಜನ್ ಬಾಂಬ್ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿತು.

1982: ಫಾಕ್ ಲ್ಯಾಂಡ್ ಯುದ್ಧ ಅಧಿಕೃತವಾಗಿ ಅಂತ್ಯಗೊಂಡಿತು.

### ಜನನ

1928: ಚೆ ಗುವೇರಾ, ಕ್ರಾಂತಿಕಾರಿ ನಾಯಕ

1946: ಡೊನಾಲ್ಡ್ ಟ್ರಂಪ್, ಅಮೆರಿಕ ಅಧ್ಯಕ್ಷ

1961: ಬಾಯ್ ಜಾರ್ಜ್, ಬ್ರಿಟಿಷ್ ಗಾಯಕ

# ನೀರಾ ಆರ್ಯ: ಸ್ವಾತಂತ್ರ್ಯ ಹೋರಾಟದ ಧೈರ್ಯಶಾಲಿ ಮಹಿಳೆ

**ವಿಶ್ವಾಸ್ ಡಿ. ಗೌಡ**

ಭಾರತದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿ ಅನೇಕ ಪುರುಷರ ಜೊತೆಗೆ ಮಹಿಳೆಯರೂ ತಮ್ಮ ಪ್ರಾಣವನ್ನು ಪಣಕ್ಕಿಟ್ಟು ದೇಶಕ್ಕಾಗಿ ಹೋರಾಡಿದ್ದಾರೆ. ಅಂತಹ ಧೈರ್ಯಶಾಲಿ ಮಹಿಳೆಯರಲ್ಲಿ ನೀರಾ ಆರ್ಯ ಅವರ ಹೆಸರು ಗೌರವದಿಂದ ಉಲ್ಲೇಖಿಸಲ್ಪಡುತ್ತದೆ. ಅವರು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ನೇತೃತ್ವದ ಆಜಾದ್ ಹಿಂದ್ ಫೌಜ್‌ನ ಪ್ರಮುಖ ಸದಸ್ಯೆಯಾಗಿದ್ದರು. ದೇಶದ ಸ್ವಾತಂತ್ರ್ಯಕ್ಕಾಗಿ ಅವರು ಅನುಭವಿಸಿದ ಕಷ್ಟ, ತ್ಯಾಗ ಮತ್ತು ಸಾಹಸಗಳು ಇಂದಿನ ಯುವಜನತೆಗೆ ಸ್ಫೂರ್ತಿದಾಯಕವಾಗಿವೆ.




ನೀರಾ ಆರ್ಯ ಅವರು 1902ರ ಮಾ. 5ರಂದು ಉತ್ತರ ಪ್ರದೇಶದ ಬಾಗ್ಪತ್ ಜಿಲ್ಲೆಯ ಖೇಕ್ರಾ ಎಂಬ ಊರಲ್ಲಿ ಜನಿಸಿದರು ಎಂದು ಹೇಳಲಾಗುತ್ತದೆ. ಬಾಲ್ಯದಿಂದಲೇ ದೇಶಭಕ್ತಿ ಮತ್ತು ಧೈರ್ಯದ ಗುಣ ಬೆಳೆಸಿಕೊಂಡಿದ್ದರು. ಅವರ ವಿವಾಹ ಬ್ರಿಟಿಷ್ ಸರ್ಕಾರದ ಗುಪ್ತಚರ ಅಧಿಕಾರಿಯಾಗಿದ್ದ ಶ್ರೀಕಾಂತ್ ಜಯರಂಜನ್ ಅವರೊಂದಿಗೆ ನಡೆಯಿತು. ಆದರೆ ದೇಶಪ್ರೇಮವು ಅವರ ಜೀವನದಲ್ಲಿ ಅತ್ಯುನ್ನತ ಸ್ಥಾನದಲ್ಲಿತ್ತು. ಬ್ರಿಟಿಷರ ಸೇವೆಯಲ್ಲಿದ್ದ ತಮ್ಮ ಪತಿಯ ಅಭಿಪ್ರಾಯಗಳಿಗಿಂತ ದೇಶದ ಹಿತಾಸಕ್ತಿಯನ್ನು ಅವರು ಹೆಚ್ಚಾಗಿ ಪರಿಗಣಿಸಿದರು.

ಸ್ವಾತಂತ್ರ್ಯ ಹೋರಾಟದ ದಿನಗಳಲ್ಲಿ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರು ಆಜಾದ್ ಹಿಂದ್ ಫೌಜ್ ಸ್ಥಾಪಿಸಿದಾಗ, ನೀರಾ ಆರ್ಯ ಅವರು ಅದರಲ್ಲಿ ಸೇರಿ ದೇಶಸೇವೆಗೆ ಮುಂದಾದರು. ಅವರು ರಾಣಿ ಝಾನ್ಸಿ ರೆಜಿಮೆಂಟ್‌ನೊಂದಿಗೆ ಸಂಪರ್ಕ ಹೊಂದಿ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿದರು. ಗುಪ್ತಚರ ಕಾರ್ಯಾಚರಣೆಗಳಲ್ಲಿ ತೊಡಗಿಸಿಕೊಂಡು ಬ್ರಿಟಿಷರ ವಿರುದ್ಧ ಮಹತ್ವದ ಮಾಹಿತಿ ಸಂಗ್ರಹಿಸುವ ಕಾರ್ಯದಲ್ಲಿ ಪಾಲ್ಗೊಂಡರು.

ನೀರಾ ಆರ್ಯ ಅವರ ಜೀವನದ ಅತ್ಯಂತ ಪ್ರಸಿದ್ಧ ಘಟನೆಯೆಂದರೆ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಪ್ರಾಣವನ್ನು ರಕ್ಷಿಸಿದ ಘಟನೆ. ಬ್ರಿಟಿಷರ ಪರ ಕೆಲಸ ಮಾಡುತ್ತಿದ್ದ ಅವರ ಪತಿ, ನೇತಾಜಿಯವರ ಚಟುವಟಿಕೆಗಳ ಬಗ್ಗೆ ಮಾಹಿತಿ ಸಂಗ್ರಹಿಸಿ ಅವರನ್ನು ಕೊಲ್ಲುವ ಸಂಚು ರೂಪಿಸಿದ್ದಾನೆ ಎಂಬ ಮಾಹಿತಿ ದೊರಕಿತು. ದೇಶದ ನಾಯಕನ ಜೀವ ಉಳಿಸುವುದು ತನ್ನ ಕರ್ತವ್ಯ ಎಂದು ಭಾವಿಸಿದ ನೀರಾ ಆರ್ಯ ಅವರು ಕಠಿಣ ನಿರ್ಧಾರ ತೆಗೆದುಕೊಂಡರು. ಕೆಲವು ವರದಿಗಳ ಪ್ರಕಾರ, ನೇತಾಜಿಯವರ ರಕ್ಷಣೆಯ ಸಲುವಾಗಿ ತಮ್ಮ ಪತಿಯನ್ನು ತಾವೇ ಹತ್ಯೆ ಮಾಡಿದರು ಎನ್ನಲಾಗುತ್ತದೆ. ಈ ಘಟನೆಯು ಅವರ ದೇಶಭಕ್ತಿಯ ಪರಮಾವಧಿಯನ್ನು ತೋರಿಸುತ್ತದೆ.

ಈ ಘಟನೆಯ ನಂತರ ಬ್ರಿಟಿಷರು ಅವರನ್ನು ಬಂಧಿಸಿ ಕಾರಾಗೃಹಕ್ಕೆ ಕಳುಹಿಸಿದರು. ಸೆರೆಮನೆಯಲ್ಲಿದ್ದಾಗ ಅವರಿಗೆ ಅಮಾನವೀಯ ಹಿಂಸೆ ನೀಡಲಾಯಿತು. ಆಜಾದ್ ಹಿಂದ್ ಫೌಜ್ ಮತ್ತು ನೇತಾಜಿಯವರ ಕುರಿತು ಮಾಹಿತಿ ಪಡೆಯಲು ಅಧಿಕಾರಿಗಳು ಪ್ರಯತ್ನಿಸಿದರೂ, ಅವರು ಯಾವುದೇ ರಹಸ್ಯವನ್ನು ಬಾಯ್ಬಿಟ್ಟಿಲ್ಲ. ಅನೇಕ ಚಿತ್ರಹಿಂಸೆಗಳನ್ನು ಅನುಭವಿಸಿದರೂ ಅವರ ದೇಶಪ್ರೇಮ ಮತ್ತು ಆತ್ಮಸ್ಥೈರ್ಯ ಕುಂದಲಿಲ್ಲ. ತಮ್ಮ ಸಹಚರರ ಬಗ್ಗೆ ಮಾಹಿತಿಯನ್ನು ಬಹಿರಂಗಪಡಿಸದೆ ಅವರು ರಾಷ್ಟ್ರಭಕ್ತಿಯ ಆದರ್ಶವನ್ನು ಮೆರೆದರು.

ಭಾರತಕ್ಕೆ 1947ರಲ್ಲಿ ಸ್ವಾತಂತ್ರ್ಯ ದೊರೆತ ನಂತರವೂ ನೀರಾ ಆರ್ಯ ಅವರಿಗೆ ನಿರೀಕ್ಷಿತ ಗೌರವ ಮತ್ತು ಸೌಲಭ್ಯಗಳು ದೊರೆಯಲಿಲ್ಲ. ಸ್ವಾತಂತ್ರ್ಯಕ್ಕಾಗಿ ಅಪಾರ ತ್ಯಾಗ ಮಾಡಿದ ಈ ವೀರ ಮಹಿಳೆ ಜೀವನದ ಕೊನೆಯ ದಿನಗಳಲ್ಲಿ ಆರ್ಥಿಕ ಸಂಕಷ್ಟಗಳನ್ನು ಎದುರಿಸಬೇಕಾಯಿತು. ಜೀವನ ನಿರ್ವಹಣೆಗೆ ಹೂವುಗಳನ್ನು ಮಾರಾಟ ಮಾಡುವಂತಹ ಕೆಲಸಗಳನ್ನು ಸಹ ಮಾಡಿದರು ಎಂದು ಹೇಳಲಾಗುತ್ತದೆ. ಆದರೂ ಅವರು ದೇಶಕ್ಕಾಗಿ ಮಾಡಿದ ಸೇವೆಯ ಬಗ್ಗೆ ಎಂದಿಗೂ ಪಶ್ಚಾತ್ತಾಪಪಡಲಿಲ್ಲ.

ನೀರಾ ಆರ್ಯ ಅವರು ತಮ್ಮ ಅನುಭವಗಳನ್ನು ದಾಖಲಿಸುವ ಹಲವು ಕೃತಿಗಳನ್ನು ಕೂಡ ರಚಿಸಿದ್ದಾರೆ. ಅವರ ಬರಹಗಳು ಸ್ವಾತಂತ್ರ್ಯ ಹೋರಾಟದ ಅಪರೂಪದ ಘಟನೆಗಳನ್ನು ತಿಳಿಸಿಕೊಡುತ್ತವೆ. ದೇಶಕ್ಕಾಗಿ ತಮ್ಮ ಬದುಕನ್ನೇ ಅರ್ಪಿಸಿದ ಮಹಿಳೆಯರ ಹೋರಾಟವನ್ನು ಅರಿಯಲು ಅವರ ಕೃತಿಗಳು ಸಹಕಾರಿಯಾಗಿವೆ.

1998ರ ಜುಲೈ 26ರಂದು ನೀರಾ ಆರ್ಯ ಅವರು ನಿಧನರಾದರು. ಆದರೆ ಅವರ ದೇಶಭಕ್ತಿ, ಧೈರ್ಯ ಮತ್ತು ತ್ಯಾಗದ ಜೀವನ ಇಂದಿಗೂ ಅನೇಕರಿಗೆ ಮಾದರಿಯಾಗಿದೆ. ಸ್ವಾತಂತ್ರ್ಯ ಹೋರಾಟದಲ್ಲಿ ಮಹಿಳೆಯರ ಪಾತ್ರ ಎಷ್ಟು ಮಹತ್ವದ್ದಾಗಿತ್ತು ಎಂಬುದನ್ನು ಅವರ ಜೀವನ ಸ್ಪಷ್ಟಪಡಿಸುತ್ತದೆ.

ಇಂದು ನಾವು ಸ್ವತಂತ್ರ ಭಾರತದಲ್ಲಿ ಬದುಕುತ್ತಿರುವಾಗ, ನೀರಾ ಆರ್ಯ ಅವರಂತಹ ವೀರ ಮಹಿಳೆಯರನ್ನು ಸ್ಮರಿಸುವುದು ನಮ್ಮ ಕರ್ತವ್ಯವಾಗಿದೆ. ಅವರ ಜೀವನ ನಮಗೆ ದೇಶಪ್ರೇಮ, ತ್ಯಾಗ, ನಿಷ್ಠೆ ಮತ್ತು ಧೈರ್ಯದ ಪಾಠವನ್ನು ಕಲಿಸುತ್ತದೆ. ದೇಶಕ್ಕಾಗಿ ಯಾವುದೇ ತ್ಯಾಗಕ್ಕೂ ಸಿದ್ಧರಾಗಿದ್ದ ಅವರಂತಹ ಮಹನೀಯರ ಕೊಡುಗೆಯಿಂದಲೇ ಭಾರತ ಸ್ವಾತಂತ್ರ್ಯವನ್ನು ಗಳಿಸಿತು. ಆದ್ದರಿಂದ ನೀರಾ ಆರ್ಯ ಅವರ ಜೀವನಗಾಥೆ ಭಾರತೀಯರ ಹೃದಯದಲ್ಲಿ ಸದಾ ಅಚ್ಚಳಿಯದೆ ಉಳಿಯುವ ಪ್ರೇರಣಾದಾಯಕ ಅಧ್ಯಾಯವಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248